**All India Radio: Bangalore**
**National Bulletin In Kannada**
**03.10.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**03.10.2026 1.10 p.m.**
**<><><><>**

ಮುಖ್ಯಾಂಶಗಳು

1. ರಾಷ್ಟ್ರದ ಆರ್ಥಿಕ ಸದೃಢತೆ, ಎಲ್ಲರ ಒಳಗೊಳ್ಳುವಿಕೆಯ ಮೇಲೆ ಅವಲಂಬಿತ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿಮತ
2. ಭಾರತ-ಅಮೆರಿಕ ಆರ್ಥಿಕ ಪಾಲುದಾರಿಕೆ ಬಲಪಡಿಸುವಲ್ಲಿ ಚಾರ್ಟೆರ್ಡ್ ಅಕೌಂಟೆಟ್‌ಗಳ ಪಾತ್ರ ಪ್ರಮುಖ - ಕೇಂದ್ರ ಸಚಿವ ಪಿಯೂಷ್ ಗೋಯಲ್
3. ಹೊರ್ಮುಜ್ ಜಲಸಂಧಿಯಲ್ಲಿ ಹಡಗೊಂದರ ಮೇಲೆ ಕ್ಷಿಪಣಿ ದಾಳಿ: ಐದು ಮಂದಿ ಭಾರತೀಯರ ರಕ್ಷಣೆ
4. ಕುಖ್ಯಾತ ಮಾದಕವಸ್ತು ಕಳ್ಳಸಾಗಣೆಗಾರ ನವ್‌ಪ್ರೀತ್ ಸಿಂಗ್ ಟರ್ಕಿಯಿಂದ ಭಾರತಕ್ಕೆ ಹಸ್ತಾಂತರ
5. ಏಷ್ಯನ್ ಗೇಮ್ಸ್ ಕ್ರಿಕೆಟ್ ಫೈನಲ್: ಪಾಕಿಸ್ತಾನದ ವಿರುದ್ಧ ಗೆಲುವಿನ ಹೊಸ್ತಿಲಲ್ಲಿ ಭಾರತ

<><><><>

ದೇಶದ ಆರ್ಥಿಕ ಸದೃಢತೆ ಮತ್ತು ಸುಸ್ಥಿರ ಪ್ರಗತಿ, ಜಿಡಿಪಿಯನ್ನು ಆಧರಿಸುವ ಜೊತೆಗೆ ಅಭಿವೃದ್ಧಿಯ ಫಲಗಳು ಪ್ರತಿಯೊಬ್ಬ ಪ್ರಜೆಗೂ ಹಾಗೂ ಪ್ರತಿ ಪ್ರದೇಶಕ್ಕೂ ತಲುಪುವುದರ ಮೇಲೆ ಅವಲಂಬಿತವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ಆಯೋಜಿಸಲಾಗಿದ್ದ 'ಜನೇ ಕೌಟಿಲ್ಯ ಆರ್ಥಿಕ ಸಮಾವೇಶ'ದ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಯಾವುದೇ ಪ್ರಜೆ ಅಥವಾ ಪ್ರದೇಶ ಅಭಿವೃದ್ಧಿಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದೇ ನೈಜ ಆರ್ಥಿಕ ಸಮರ್ಥನೆಯಾಗಿದೆ ಎಂದು ಪ್ರತಿಪಾದಿಸಿದರು. ಎಲ್ಲರನ್ನೂ ಒಳಗೊಳ್ಳುವ ಈ ಆರ್ಥಿಕ ಸಿದ್ಧಾಂತದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕಿದ್ದು, ಶಿಕ್ಷಣ ಮತ್ತು ಸಬಲೀಕರಣದ ಮೂಲಕ ಮಹಿಳೆಯರು ಮುಂದಾಳತ್ವ ವಹಿಸಿಕೊಳ್ಳಲು ಅವಕಾಶ ಕಲ್ಪಿಸಬೇಕು ಎಂದರು. ಕಳೆದ ಒಂದು

ದಶಕದಲ್ಲಿ ೨೫ ಕೋಟಿಗೂ ಹೆಚ್ಚು ಭಾರತೀಯರು ಬಡತನದಿಂದ ಹೊರಬಂದಿದ್ದಾರೆ ಎಂದು ಉಲ್ಲೇಖಿಸಿದ ಉಪರಾಷ್ಟ್ರಪತಿಗಳು, ಜಿಎಸ್‌ಟಿ ವ್ಯವಸ್ಥೆಯು ಭಾರತದ ಅತ್ಯಂತ ದೊಡ್ಡ ತೆರಿಗೆ ಸುಧಾರಣೆಯಾಗಿದೆ ಎಂದರು. ಜನಧನ್-ಆಧಾರ್ ನಂತಹ ತಂತ್ರಜ್ಞಾನ ಆಧಾರಿತ ಯೋಜನೆಗಳು ದೇಶದಲ್ಲಿ ನೇರ ನಗದು ವರ್ಗಾವಣೆ ಹಾಗೂ ಹಣಕಾಸು ಸಬಲೀಕರಣಕ್ಕೆ ಹೊಸ ವೇಗ ನೀಡಿವೆ ಎಂದು ಶ್ಲಾಘಿಸಿದರು.

ಧ್ವನಿ : ಸಿ.ಪಿ.ರಾಧಾಕೃಷ್ಣನ್ (೨೨ ಸೆಕೆಂಡ್‌ಗಳು)

<><><><>

ಭಾರತ ಅಮೆರಿಕ ನಡುವಿನ ಆರ್ಥಿಕ ಬಾಂಧವ್ಯ ಮತ್ತು ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವಲ್ಲಿ ಚಾರ್ಟರ್ಡ್ ಅಕೌಂಟೆಂಟ್-ಸಿಎಗಳ ಪಾತ್ರ ಪ್ರಮುಖ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆ - ಐಸಿಎಐನ ಅಮೆರಿಕದ ಶಿಕಾಗೋ ಮಿಶಿಗನ್ ಮತ್ತು ಓಹಿಯೋ ಶಾಖೆಗಳ ನಾಯಕರು ಹಾಗೂ ಸದಸ್ಯರೊಂದಿಗೆ ನಡೆಸಿದ ಸಂವಾದದ ವೇಳೆ ಮಾತನಾಡಿದ ಅವರು, ಗಡಿಯಾಚೆಗಿನ ತೆರಿಗೆ ವಿನಾಯಿತಿ, ಕಾಯ್ದೆಗಳ ಪಾಲನೆ ಮತ್ತು ವಿಶ್ವಾಸಾರ್ಹ ಆರ್ಥಿಕ ಆಡಳಿತವನ್ನು ಸರಳೀಕರಣಗೊಳಿಸುವ ಮೂಲಕ ಭಾರತೀಯ ಉದ್ಯಮಗಳಿಗೆ ಜಾಗತಿಕ ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು ಸಿಎಗಳು ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆಯೇ ಹೊರ್ಮುಜ್ ಜಲಸಂಧಿಯಲ್ಲಿ ಕುವೈತ್ ಧ್ವಜ ಹೊಂದಿದ್ದ 'ಎಂಟಿ ಕಾಜಿಮಾ-೩ ಎಂಬ ತೈಲ ಹಡಗಿನ ಮೇಲೆ ಕ್ಷಿಪಣಿ ದಾಳಿ ನಡೆದಿದೆ. ಈ ಸಂದರ್ಭದಲ್ಲಿ ಹಡಗಿನಲ್ಲಿದ್ದ ಐವರು ಭಾರತೀಯ ಪ್ರಜೆಗಳನ್ನು ಯಶಸ್ವಿಯಾಗಿ ರಕ್ಷಿಸಲಾಗಿದೆ. ಈ ಕುರಿತು ಒಮಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಮಾಹಿತಿ ನೀಡಿದ್ದು, ರಕ್ಷಣಾ ಕಾರ್ಯಾಚರಣೆಯ ಯಶಸ್ಸಿಗೆ ಒಮಾನ್ ಅಧಿಕಾರಿಗಳು ನೀಡಿದ ನಿರಂತರ ಬೆಂಬಲ ಮತ್ತು ನೆರವಿಗಾಗಿ ಅವರಿಗೆ ಕೃತಜ್ಞತೆ ಸಲ್ಲಿಸಿದೆ. ಇತ್ತೀಚಿನ ದಿನಗಳಲ್ಲಿ ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಸಂಘರ್ಷಗಳ ಹಿನ್ನೆಲೆಯಲ್ಲಿ, ಭಾರತೀಯ ನಾವಿಕರು ಪ್ರಯಾಣಿಸುತ್ತಿದ್ದ ಹಲವು ವಾಣಿಜ್ಯ ಹಡಗುಗಳು ದಾಳಿಗೆ ಒಳಗಾಗುತ್ತಿದ್ದು, ಭಾರತೀಯ ನಾವಿಕರ ರಕ್ಷಣೆ ಕುರಿತು ಕಳವಳ

ವ್ಯಕ್ತವಾಗಿದೆ. ಈ ಸವಾಲಿನ ಪರಿಸ್ಥಿತಿಯಲ್ಲೂ ಭಾರತೀಯ ರಾಯಭಾರ ಕಚೇರಿಯು ಒಮಾನ್ ಸರ್ಕಾರ ಹಾಗೂ ಸ್ಥಳೀಯ ಆಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸುರಕ್ಷತಾ ಕಾರ್ಯಾಚರಣೆಗಳನ್ನು ಯಶಸ್ವಿಯಾಗಿ ನಿರ್ವಹಿಸುತ್ತಿದೆ.

<><><><>

ಮಾದಕವಸ್ತು ಜಾಲ ಮಟ್ಟ ಹಾಕುವಲ್ಲಿ ಕೇಂದ್ರ ಸರ್ಕಾರ ಐತಿಹಾಸಿಕ ಸಾಧನೆ ಮಾಡಿದ್ದು, ತೀವ್ರ ಅಪರಾಧ ಹಿನ್ನೆಲೆಯುಳ್ಳ ಮಾದಕವಸ್ತು ಕಳ್ಳ ಸಾಗಾಣೆಯ ಪ್ರಮುಖ ಆರೋಪಿ ನವಪ್ರೀತ್ ಸಿಂಗ್‌ನನ್ನು ಟರ್ಕಿಯಿಂದ ಭಾರತಕ್ಕೆ ಗಡಿಪಾರು ಮಾಡುವಲ್ಲಿ ಯಶಸ್ವಿಯಾಗಿದೆ ಎಂದು ಕೇಂದ್ರ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ನವಾಬ್ ವಿರ್ಕ್ ಎಂಬ ನಕಲಿ ಗುರುತಿನಡಿ ಟರ್ಕಿ ದೇಶದ ಪೌರತ್ವ ಪಡೆದಿದ್ದ ನವ್‌ಪ್ರೀತ್ ಸಿಂಗ್, ಅಫ್ಘಾನಿಸ್ತಾನದಿಂದ ಭಾರತಕ್ಕೆ ಹೆರಾಯಿನ್ ಮತ್ತು ಮೆಥಾಂ ಫೆಟಮೈನ್‌ನಂತಹ ಮಾದಕ ಮಸ್ತುಗಳನ್ನು ಅಕ್ರಮವಾಗಿ ಪೂರೈಸುತ್ತಿದ್ದ ಎಂದು ಕೇಂದ್ರ ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ನೀಡಿದ್ದಾರೆ. ಭಾರತೀಯ ತನಿಖಾ ಸಂಸ್ಥೆಗಳು, ಆರೋಪಿಯ ರಹಸ್ಯ ಜಾಲವನ್ನು ಸತತವಾಗಿ ಬೆನ್ನಟ್ಟಿ, ಗಡಿಪಾರು ಪ್ರಕ್ರಿಯೆಯನ್ನು ಯಶಸ್ವಿಗೊಳಿಸಿವೆ ಇಂದು ಈ ಕಳ್ಳಸಾಗಣೆದಾರನನ್ನು ಭಾರತಕ್ಕೆ ಕರೆತರಲಾಗಿದ್ದು, ವಿವಿಧ ಪ್ರಕರಣಗಳಡಿ ಜೈಲು ಪಾಲು ಮಾಡಲಾಗಿದೆ ಎಂದ ಸಚಿವರು, ಡಿಸೆಂಬರ್ ೨೦೨೯ರೊಳಗೆ ದೇಶದಲ್ಲಿರುವ ಮಾದಕದ್ರವ್ಯ ಜಾಲವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, ಜನ ಸೇವೆಯೇ ದೇಶ ಸೇವೆ ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಸಾಗರಮಾಲಾ ಯೋಜನೆ ಕುರಿತ ಒಂದು ವರದಿ ಇಲ್ಲಿದೆ. ಭಾರತದ ಸುದೀರ್ಘ ಕರಾವಳಿ ತೀರವನ್ನು ದೇಶದ ಆರ್ಥಿಕ ಪ್ರಗತಿಯ ಚಾಲಕ ಶಕ್ತಿಯಾಗಿ ಪರಿವರ್ತಿಸುವ ಉದ್ದೇಶದಿಂದ ೨೦೧೫ರಲ್ಲಿ ಚಾಲನೆ ನೀಡಲಾದ 'ಸಾಗರಮಾಲಾ ಯೋಜನೆ'ಯು ಬಂದರುಗಳನ್ನು ಉತ್ಪಾದನಾ

ಕೇಂದ್ರಗಳು, ಮಾರುಕಟ್ಟೆಗಳು ಹಾಗೂ ಸಾರ್ವಜನಿಕರೊಂದಿಗೆ ಯಶಸ್ವಿಯಾಗಿ ಸಂಪರ್ಕಿಸುತ್ತಿದೆ. ಬಂದರುಗಳ ಆಧುನೀಕರಣ, ಸುಸಜ್ಜಿತ ರಸ್ತೆ ಮತ್ತು ರೈಲು ಸಂಪರ್ಕ, ಬಂದರು ಆಧಾರಿತ ಕೈಗಾರೀಕರಣ, ಕರಾವಳಿ ಸಮುದಾಯಗಳ ಅಭಿವೃದ್ಧಿ ಹಾಗೂ ಕರಾವಳಿ ಹಡಗು ಸಾರಿಗೆ ಮತ್ತು ಒಳನಾಡು ಜಲಮಾರ್ಗಗಳ ಬಳಕೆ, ಈ ಐದು ಪ್ರಮುಖ ಸ್ತಂಭಗಳ ಆಧಾರದ ಮೇಲೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸಾಗರಮಾಲಾ ಯೋಜನೆಯಡಿ ಇದುವರೆಗೆ ೬.೦೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ೮೪೫ಕ್ಕೂ ಹೆಚ್ಚು ಯೋಜನೆಗಳನ್ನು ಗುರುತಿಸಲಾಗಿದ್ದು, ಈ ಪೈಕಿ ೩೧೫ ಯೋಜನೆಗಳು ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿವೆ. ಯೋಜನೆಯ ಪರಿಣಾಮವಾಗಿ ಪ್ರಮುಖ ಬಂದರುಗಳಲ್ಲಿ ಹಡಗುಗಳ ತಂಗುವಿಕೆ ಮತ್ತು ನಿರ್ವಹಣಾ ಅವಧಿಯು ೨೦೧೪ರಲ್ಲಿ ಇದ್ದ ೯೬ ಗಂಟೆಗಳಿಂದ ೨೦೨೫ರ ವೇಳೆಗೆ ಸುಮಾರು ೪೯ ಗಂಟೆಗಳಿಗೆ ಗಮನಾರ್ಹವಾಗಿ ಇಳಿಕೆಯಾಗಿದೆ. ಪ್ರಸ್ತುತ ಜಾಗತಿಕ ಮಟ್ಟದ ಅಗ್ರ ೧೦೦ ಬಂದರುಗಳ ಪಟ್ಟಿಯಲ್ಲಿ ಭಾರತದ ಒಂಬತ್ತು ಬಂದರುಗಳು ಸ್ಥಾನ ಪಡೆದುಕೊಂಡಿದ್ದು, ಕರಾವಳಿ ಸರಕು ಸಾರಿಗೆಯಲ್ಲೂ ಬೃಹತ್ ಪ್ರಗತಿ ಕಂಡುಬಂದಿದೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಶಿಕಾಗೋದಲ್ಲಿ ಆರ್ಚರ್ ಡೇನಿಯಲ್ಸ್ ಮಿಡ್‌ಲ್ಯಾಂಡ್ ಸಂಸ್ಥೆ ಮಂಡಳಿಯ ಅಧ್ಯಕ್ಷ ಹಾಗೂ ಸಿಇಒ ಜುವಾನ್ ರಿಕಾರ್ಡೋ ಲೂಸಿಯಾನೊ ಅವರನ್ನು ಭೇಟಿಯಾಗಿ ಉನ್ನತ ಮಟ್ಟದ ಮಾತುಕತೆ ನಡೆಸಿದರು. ಭಾರತದಲ್ಲಿ ಎಡಿಎಂ ಸಂಸ್ಥೆಯ ಹೂಡಿಕೆ ಹಾಗೂ ಉದ್ಯಮ ವಿಸ್ತರಣೆಗೆ ಇರುವ ಅವಕಾಶಗಳ ಕುರಿತು ಸಮಾಲೋಚನೆ ನಡೆಸಿದ್ದಾಗಿ ತಿಳಿಸಿದ್ದಾರೆ.

<><><>

ಜಪಾನ್‌ನ ನಿಶ್ಶಿನ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿಂದು ಭಾರತ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೧ ರನ್ ಗಳಿಸಿ, ಪಾಕಿಸ್ತಾನಕ್ಕೆ ೨೧೨ ರನ್‌ಗಳ ಗೆಲುವಿನ ಗುರಿ ನೀಡಿದೆ. ಗುರಿ ಬೆನ್ನತ್ತಿರುವ ಪಾಕಿಸ್ತಾನ ತಂಡ ಇತ್ತೀಚಿನ ವರದಿ ಬಂದಾಗ ೧೭ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೬೦ ರನ್ ಗಳಿಸಿ ಆಡುತ್ತಿದೆ.

<><><><>

ಜಪಾನ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್‌ನ ಗಾಲ್ಫ್ ಸ್ಪರ್ಧೆಯಲ್ಲಿ ಭಾರತದ ಪ್ರಣವಿ ಅರಸ್ ಚಿನ್ನದ ಪದಕ ಗೆದ್ದಿದ್ದು, ಆ ಮೂಲಕ ಈ ಸಾಧನೆ ಮಾಡಿದ ಮೊದಲ ಭಾರತೀಯ ಮಹಿಳಾ ಗಾಲ್ಫ್ ಕ್ರೀಡಾಪಟು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಈ ಸ್ಪರ್ಧೆಯ ತಂಡ ವಿಭಾಗದಲ್ಲೂ ಭಾರತ ಬೆಳ್ಳಿ ಪದಕ ಗೆದ್ದಿದೆ. ಇನ್ನು ಮಹಿಳಾ ರಿಕರ್ವ್ ವೈಯಕ್ತಿಕ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಭಾರತದ ಉದಯೋನ್ಮುಖ ಬಿಲ್ಲುಗಾರ್ತಿ ಕುಂಕುಮ್ ಮೊಹೊದ್ ಅಚ್ಚರಿಯ ಪ್ರದರ್ಶನ ನೀಡಿದ್ದು, ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಫೈನಲ್‌ನಲ್ಲಿ ಅವರು ದಕ್ಷಿಣ ಕೊರಿಯಾದ ಓಹ್ ಯೆಜಿನ್ ವಿರುದ್ಧ ೫-೫ ಅಂತರದ ಸಮಬಲದ ಬಳಿಕ ನಡೆದ ಶೂಟ್ ಆಫ್‌ನಲ್ಲಿ ೧೦-೮ ಅಂತರದಲ್ಲಿ ಗೆದ್ದರು. ಪದಕ ವಿಜೇತ ಕ್ರೀಡಾಪಟುಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿನಂದನೆ ಸಲ್ಲಿಸಿದ್ದು, ಭವಿಷ್ಯದ ಯಶಸ್ಸಿಗೆ ಹಾರೈಸಿದ್ದಾರೆ.

<><><><>

ನವ ಚಂಡಿಗಢದ ಮಹಾರಾಜ ಯದುವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ೩ನೇ ಹಾಗೂ ಅಂತಿಮ ಪಂದ್ಯದಲ್ಲಿ ಭಾರತ ಮತ್ತು ವೆಸ್ಟ್ ಇಂಡೀಸ್ ಮುಖಾಮುಖಿಯಾಗಲಿದೆ. ಪಂದ್ಯ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ. ಮೊದಲೆರಡು ಪಂದ್ಯಗಳಲ್ಲಿ ಗೆಲುವು ದಾಖಲಿಸಿರುವ ಭಾರತ, ಈಗಾಗಲೇ ೨-೦ ಅಂತರದ ಮುನ್ನಡೆ ಸಾಧಿಸಿ ಸರಣಿ ವಶಪಡಿಸಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>